SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar
UNIVERSITY LIBRARY & LEARNING RESOURCE CENTRE

Online Newspaper Clipping Service
**Dated, Saturday, 29th April – 2017**

**Pg.No.03**

ಪ್ರಜಾವಾಣಿ

### ರಾಮಸಾಗರ: ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟನ

# ನಿಯಮಿತವಾಗಿ ವೈದ್ಯಕೀಯ ತಪಾಸಣೆ ಮಾಡಿಸಿ

ಪ್ರಜಾವಾಣಿ ವಾರ್ತೆ

ಕೋಲಾರ: 'ಪ್ರತಿ ವ್ಯಕ್ತಿಯೂ ನಿಯಮಿತವಾಗಿ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು' ಎಂದು ಬಂಗಾರಪೇಟೆ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ತಿಳಿಸಿದರು.

ರೋಟರಿ ಕ್ಲಬ್, ಗ್ರಾಮ ಪಂಚಾಯಿತಿ, ಆರ್.ಎಲ್.ಜಾಲಪ್ಪ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಹಾಗೂ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದ ಸಹಯೋಗದಲ್ಲಿ ರಾಮಸಾಗರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.


ವೈದ್ಯರು ಸಾರ್ವಜನಿಕರ ಆರೋಗ್ಯ ತಪಾಸಣೆ ಮಾಡಿದರು

'ಆರೋಗ್ಯಕ್ಕಿಂತ ಮಿಗಿಲಾದ ಸಂಪತ್ತು ಮತ್ತೊಂದಿಲ್ಲ. ಆರೋಗ್ಯವೇ ಭಾಗ್ಯ ಎಂದು ಹಿರಿಯರು ಹೇಳಿದ್ದಾರೆ. ಆದ ಕಾರಣ ಸಾರ್ವಜನಿಕರು ಆರೋಗ್ಯ ನಿರ್ಲಕ್ಷಿಸಬಾರದು. ವರ್ಷದಲ್ಲಿ ಮೂರ್‍ನಾಲ್ಕು ಬಾರಿಯಾದರೂ ಆರೋಗ್ಯ ತಪಾಸಣೆ ಮಾಡಿಸಬೇಕು' ಎಂದು ಸಲಹೆ ನೀಡಿದರು.

ರೋಟರಿ ಸಂಸ್ಥೆ ಅಧ್ಯಕ್ಷ ಎಚ್.ರಾಮಚಂದ್ರಪ್ಪ ಮಾತನಾಡಿದರು.

ಶಿಬಿರದಲ್ಲಿ ಸ್ತ್ರೀರೋಗ, ಶಸ್ತ್ರಚಿಕಿತ್ಸೆ, ಮೂಳೆ ರೋಗ ತಜ್ಞರು, ತಾಯಿ ಮತ್ತು ಮಕ್ಕಳ ವೈದ್ಯರು, ಕಿವಿ, ಗಂಟಲು, ದಂತ, ಚರ್ಮ ಹಾಗೂ ಕಣ್ಣು ತಜ್ಞರು 600ಕ್ಕೂ ಹೆಚ್ಚು ಮಂದಿಯ ಆರೋಗ್ಯ ತಪಾಸಣೆ ಮಾಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ರೇವತಿ, ಸದಸ್ಯರಾದ ಮಹಾಲಕ್ಷ್ಮಿ, ಗೀತಾ, ಶ್ವೇತಾ, ಹನುಮಂತರಾಯರೆಡ್ಡಿ, ಶ್ರೀನಿವಾಸರೆಡ್ಡಿ, ರವಿಕುಮಾರರೆಡ್ಡಿ ಪಾಲ್ಗೊಂಡಿದ್ದರು.

ಪ್ರಜಾವಾಣಿ

## ಖಾಸಗಿ ವೈದ್ಯಕೀಯ ಸೇವೆಗಳ ನಿಯಂತ್ರಣ ಕಾಯ್ದೆಗೆ ತಿದ್ದುಪಡಿ


# ‘ಮುಂಬರುವ ಅಧಿವೇಶನದಲ್ಲಿ ಮಂಡನೆ’

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಖಾಸಗಿ ವೈದ್ಯಕೀಯ ಸೇವೆಗಳ ನಿಯಂತ್ರಣ ಕಾಯ್ದೆ ತಿದ್ದುಪಡಿ ಮಸೂದೆಯನ್ನು ಮುಂದಿನ ವಿಧಾನಮಂಡಲದ ಅಧಿವೇಶನದಲ್ಲಿ ಮಂಡಿಸಲಾಗುವುದು’ ಎಂದು ಆರೋಗ್ಯ ಸಚಿವ ಕೆ.ಆರ್. ರಮೇಶ್ ಕುಮಾರ್ ತಿಳಿಸಿದರು.

ಈ ಸಂಬಂಧ ಅಗತ್ಯ ಶಿಫಾರಸುಗಳನ್ನು ಮಾಡಲು ಹೈಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ವಿಕ್ರಂಜಿತ್ ಸೇನ್ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಲಾಗಿತ್ತು, ಸಮಿತಿ ವರದಿ ಸಿದ್ಧವಾಗಿದೆ ಎಂದು ಸಚಿವರು ಶುಕ್ರವಾರ ಮಾಧ್ಯಮ ಗೋಷ್ಠಿಯಲ್ಲಿ ತಿಳಿಸಿದರು.

‘ಎಲ್ಲರಿಗೂ ಕೈಗೆಟುಕುವ ದರದಲ್ಲಿ ಗುಣಮಟ್ಟದ ಆರೋಗ್ಯ ರಕ್ಷಣೆ ಸಿಗಬೇಕು ಎಂಬ ಉದ್ದೇಶದಿಂದ ಕಾಯ್ದೆಗೆ ತಿದ್ದುಪಡಿ ತರಲಾಗುತ್ತಿದೆ. ಕಾಯ್ದೆ ಹೆಸರನ್ನು ‘ಕರ್ನಾಟಕ ಮೆಡಿಕಲ್ ಎಸ್ಟಾಬ್ಲಿಷ್‌ಮೆಂಟ್ ಆ್ಯಕ್ಟ್’ ಎಂದು ಬದಲಿಸಿ, ಸರ್ಕಾರಿ ಸಾರ್ವಜನಿಕ ಆರೋಗ್ಯ ಸಂಸ್ಥೆಗಳನ್ನೂ ವ್ಯಾಪ್ತಿಯೊಳಗೆ



ರಮೇಶ್ ಕುಮಾರ್

ತರಲಾಗುತ್ತಿದೆ’ ಎಂದರು.

ತಜ್ಞರ ವರದಿ ಬಗ್ಗೆ ಮಾಹಿತಿ ನೀಡಿದ ನ್ಯಾಯಮೂರ್ತಿ ವಿಕ್ರಂಜಿತ್ ಸೇನ್, ‘ಆರೋಗ್ಯ ಸೇವೆಯಲ್ಲಿನ ಎಲ್ಲ ಅಂಶಗಳನ್ನು ಪರಿಶೀಲಿಸಿ ಕೆಲವು ತಿದ್ದುಪಡಿಗಳನ್ನು ಸೂಚಿಸಲಾಗಿದೆ. ಪ್ರತಿಯೊಬ್ಬರಿಗೂ ಒಂದೇ ರೀತಿಯಲ್ಲಿ ವೈದ್ಯಕೀಯ ಸೇವೆ ಲಭ್ಯವಾಗಬೇಕು ಎಂಬ ಮೂಲ ಉದ್ದೇಶ ಗಮನದಲ್ಲಿಟ್ಟು ಶಿಫಾರಸು ಮಾಡಲಾಗಿದೆ’ ಎಂದರು.

‘ಖಾಸಗಿ ಆಸ್ಪತ್ರೆಗಳಲ್ಲಿ ಮನಸೋಇಚ್ಛೆ ಶುಲ್ಕ ವಸೂಲಿ ಮಾಡುತ್ತಿದ್ದು, ಬಡ ರೋಗಿಗಳು ಚಿಕಿತ್ಸೆಯಿಂದ ವಂಚಿತರಾಗಬಾರದು. ಇಡೀ ವ್ಯವಸ್ಥೆಯಲ್ಲಿ ಪಾರದರ್ಶಕತೆ ಇರಬೇಕು ಎಂಬ ಕಾಳಜಿಯಿಂದ 2007ರಲ್ಲಿ ತಂದಿರುವ ಕಾಯ್ದೆಗೆ ತಿದ್ದುಪಡಿಗೆ ಸೂಚಿಸಲಾಗಿದೆ’ ಎಂದೂ ಅವರು ಹೇಳಿದರು.

‘ಚಿಕಿತ್ಸೆ ಪಡೆಯುವ ರೋಗಿಗಳು ಹಾಗೂ ಅವರ ಕುಟುಂಬದ ಸದಸ್ಯರಿಗೆ ಚಿಕಿತ್ಸಾ ವಿವರ ಒದಗಿಸಬೇಕು. ನೋಂದಣಿ ಮಾಡಿಕೊಂಡ ಎಲ್ಲ ವೈದ್ಯರು ರೋಗಿಗಳಿಗೆ ನೀಡಿರುವ ಚಿಕಿತ್ಸಾ ವಿಧಾನವನ್ನು ಕಡ್ಡಾಯವಾಗಿ ದಾಖಲು ಮಾಡಬೇಕು. ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಾಧಿಕಾರಕ್ಕೆ ಕಾಲಕಾಲಕ್ಕೆ ಮಾಹಿತಿ ನೀಡಲು ಅನುಕೂಲವಾಗುವಂತೆ ಪ್ರಾಧಿಕಾರ ರಚಿಸಬೇಕು. ರೋಗಿಯ ಸಂಪೂರ್ಣ ವಿವರವನ್ನು ಕುಟುಂಬದ ಸದಸ್ಯರಿಗೆ ಕಡ್ಡಾಯವಾಗಿ ನೀಡಬೇಕು ಎಂದೂ ಸಲಹೆ ನೀಡಲಾಗಿದೆ.

‘ಸಮಿತಿಯ ವರದಿ ಅಂತಿಮಗೊಂಡಿದ್ದು, ಇನ್ನಷ್ಟೆ ಸಲ್ಲಿಕೆ ಆಗಬೇಕಿದೆ. ಸಮಿತಿಯ ಸಲಹೆಗಳನ್ನು ಸೇರಿಸಿ ಪ್ರಸ್ತಾವಿತ ತಿದ್ದುಪಡಿ ಕಾಯ್ದೆ ರಚಿಸುವಂತೆ ರಾಷ್ಟ್ರೀಯ ಕಾನೂನು ಶಾಲೆಯ ಪ್ರೊ. ನಂದಿಮಠ ಅವರಿಗೆ ಕೋರಲಾಗಿದೆ’ ಎಂದು ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಶಾಲಿನಿ ರಜನೀಶ್ ತಿಳಿಸಿದರು.

### ತಿದ್ದುಪಡಿಯಲ್ಲಿರುವ ಪ್ರಮುಖ ಅಂಶಗಳು

- ಎಲ್ಲ ಮಾದರಿಯ ವೈದ್ಯಕೀಯ ಪದ್ಧತಿಗಳು (ಅಲೋಪಥಿ, ಆಯುರ್ವೇದ, ಯೋಗ, ಯುನಾನಿ, ಸಿದ್ಧ, ಹೋಮಿಯೋಪಥಿ) ಒಂದೇ ಸೂರಿನಡಿ ಬರಲಿವೆ
- ನೋಂದಣಿಗೆ ಏಕಗವಾಕ್ಷಿ ವ್ಯವಸ್ಥೆ
- ಕುಂದುಕೊರತೆ ಪರಿಹಾರ ಸಮಿತಿ ರಚನೆ
- ರಾಜ್ಯ ಮತ್ತು ಜಿಲ್ಲಾ ಮಟ್ಟದ ಪ್ರಾಧಿಕಾರ ರಚನೆ
- ವಿಶ್ವ ಆರೋಗ್ಯ ಸಂಸ್ಥೆಯ ಮಾರ್ಗಸೂಚಿ ಅನ್ವಯ ರೋಗಿಗಳ ಘೋಷಣಾ ಪಟ್ಟಿ ಪ್ರಕಟಿಸಬೇಕು
- ಘೋಷಣಾ ಪಟ್ಟಿಯಲ್ಲಿ ರೋಗಿ ಪರವಾಗಿರುವವರ ಹೊಣೆಗಾರಿಕೆ, ಸೇವೆಗೆ ವಸೂಲು ಮಾಡುವ ದರದಲ್ಲಿ ಪಾರದರ್ಶಕತೆ, ಸೇವೆ ನೀಡುವ ವೈದ್ಯರ ಹೊಣೆಗಾರಿಕೆ ಮಾಹಿತಿ ಇರಬೇಕು
- ಜನರಿಕ್ ಔಷಧ ಪಡೆಯುವಂತೆ ಸಲಹೆ ಕೊಡಬೇಕು